ಆ) ಹೌದು

ಇ) ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಹೈದರಾಬಾದ್ ಕರ್ನಾಟಕವು ಸೇರಿದಂತೆ ಉತ್ತರ ಕರ್ನಾಟಕದಲ್ಲಿ 15 ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಅದರಲ್ಲಿ 10 ಪಾಲಿಟೆಕ್ನಿಕ್‌ಗಳನ್ನು ಸದರಿ ಪ್ರಸಕ್ತ ಸಾಲಿನಲ್ಲಿ ಸ್ಥಾಪಿಸುವಂತೆ ಮನವಿಗಳು ಬಂದಿದ್ದು, ಹೈದರಾಬಾದ್-ಕರ್ನಾಟಕ ಭಾಗದಲ್ಲಿ ಸರ್ಕಾರಿ ಪಾಲಿಟೆಕ್ನಿಗಳನ್ನು ಪ್ರಾರಂಭಿಸಲು ತಾಂತ್ರಿಕ ಮಾನವ ಸಂಪನ್ಮೂಲದ ಅಧ್ಯಯನದ ಅಗತ್ಯತೆ ಇದ್ದು ಈ ಕುರಿತು ತಾಂತ್ರಿಕ ಶಿಕ್ಷಣ ಇಲಾಖೆಯ ಹಂತದಲ್ಲಿ ಪರಿಶೀಲನೆ ನಡೆಯುತ್ತಿದೆ ಈ ಬಗ್ಗೆ ಒಂದು ಸಮಗ್ರ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ ಈಗಿರುವ ಎ ಐ ಸಿ ಟಿ ಇ ನಿಯಮಾನುಸಾರ ಪ್ರತಿ ಪಾಲಿಟೆಕ್ನಿಕ್‌ಗೆ 10 ಎಕರೆ ಒದಗಿಸಬೇಕಾಗುತ್ತದೆ ಅಲ್ಲದೆ ಮೂಲಭೂತ ಸೌಕರ್ಯಗಳಾದ ಕಟ್ಟಡ, ಯಂತ್ರೋಪಕರಣ ಪೀರೋಪಕರಣ ಮುಂತಾದವುಗಳನ್ನು ಒದಗಿಸಲು ಪ್ರತಿ ಪಾಲಿಟೆಕ್ನಿಕ್‌ಗೆ 3 ವರ್ಷಗಳ ಅವಧಿಯಲ್ಲಿ ಅಂದಾಜು 5 ಕೋಟಿ ರೂಗಳ ಆಯವ್ಯಯವನ್ನು ಒದಗಿಸಬೇಕಾಗುತ್ತದೆ ಆದ್ದರಿಂದ 2007-08ನೇ ಸಾಲಿನ ಆಯವ್ಯಯದಲ್ಲಿ ಲಭ್ಯವಾಗುವ ಅನುದಾನವನ್ನು ಗಮನದಲ್ಲಿರಿಸಿಕೊಂಡು ಹೊಸ ಪಾಲಿಟೆಕ್ನಿಕ್ ಪ್ರಾರಂಭಿಸಲು ಅದರಲ್ಲಿಯೂ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಆದ್ಯತೆ ನೀಡಲು ಪರಿಶೀಲಿಸಲಾಗುವುದು

458 ಶ್ರೀ ನಾಗರಾಜು ಎಂ ಟಿ ಬಿ (ಹೊಸಕೋಟೆ) . ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸಕೋಟೆ ಪಟ್ಟಣದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಲೆ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳ ವ್ಯಾಸಂಗಕ್ಕೆ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು,

ಆ) ದಾಖಲಾಗಿರುವ ವಿದ್ಯಾರ್ಥಿಗಳ ಪೈಕಿ ಬಾಲಕರ ಮತ್ತು ಬಾಲಕಿಯರ ಸಂಖ್ಯೆ ಎಷ್ಟು ,

ಇ) ವಿದ್ಯಾರ್ಥಿಗಳ ಸಂಖ್ಯೆಯನ್ನಾಧರಿಸಿ ಪ್ರತ್ಯೇಕ ಪದವಿ ಪೂರ್ವ ಕಾಲೇಜಿಗಾಗಿ ಕೋರಿಕೆ ಬಂದಿದೆಯೇ,

ಈ) ಬಂದಿದ್ದಲ್ಲಿ ಕೋರಿಕೆಗೆ ಅನುಗುಣವಾಗಿ ಸರ್ಕಾರವು ಹಾಲಿ ಇರುವ ಪದವಿ ಪೂರ್ವ ಕಾಲೇಜನ್ನು ಬಾಲಕ ಮತ್ತು ಬಾಲಕಿಯರಿಗಾಗಿ ಬೇರ್ಪಡಿಸಲು ಉದ್ದೇಶಿಸಿದೆಯೇ

ಉ) ಉದ್ದೇಶಿಸಿದ್ದಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಪ್ರತ್ಯೇಕತೆಗಾಗಿ ಆದೇಶ ಹೊರಡಿಸಲಾಗುವುದು ?

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು .

ಅ)

1	ಕಲಾ ವಿಭಾಗದಲ್ಲಿ	–	982
2	ವಾಣಿಜ್ಯ ವಿಭಾಗದಲ್ಲಿ	–	387
3	ವಿಜ್ಞಾನ ವಿಭಾಗದಲ್ಲಿ	–	88
		ಒಟ್ಟು	1457

ಆ) 1) ಬಾಲಕರು –845

2) ಬಾಲಕಿಯರು –612

ಇ) ಹೌದು

ಈ) ಮತ್ತು ಉ) ಬಾಲಕಿಯರಿಗಾಗಿ ಪ್ರತ್ಯೇಕ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಬಿಸುವ ಬಗ್ಗೆ ಆಯುಕ್ತರಿಂದ ಪ್ರಸ್ತಾವನೆಯನ್ನು ಪಡೆದು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು

370 ಶ್ರೀ ಕೆ ಗೋಪಾಲ್ ಪೂಜಾರಿ ಮಾನ್ಯ ವಸತಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2005–06 ಮತ್ತು 2006–07ನೇ ಸಾಲಿನಲ್ಲಿ ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು, ಬೈಂದೂರು, ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ನಿವೇಶನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು,

ಆ) ಬಂದಿರುವ ಅರ್ಜಿಗಳಲ್ಲಿ ಎಷ್ಟು ಜನರಿಗೆ ನಿವೇಶನ ವಿತರಿಸಲಾಗಿದೆ,

ಇ) ಎಷ್ಟು ಜನರು ಬಾಕಿ ಇದ್ದಾರೆ (ವಿವರ ನೀಡುವುದು)?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) 2005–06 ಮತ್ತು 2006–07ನೇ ಸಾಲಿನಲ್ಲಿ ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು, ಬೈಂದೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ನಿವೇಶನ ಕೋರಿ ಬಂದಿರುವ ಅರ್ಜಿಗಳು ಕ್ರಮವಾಗಿ 113 ಮತ್ತು 283 ಗಳಾಗಿರುತ್ತವೆ

ಆ) 2005–2006 ಮತ್ತು 2006–2007 ನೇ ಸಾಲಿನಲ್ಲಿ ಸ್ವೀಕೃತವಾದ ಒಟ್ಟು 396 ಅರ್ಜಿಗಳಲ್ಲಿ 105 ನಿವೇಶನಗಳನ್ನು ಇಲ್ಲಿಯವರೆಗೆ ಹಂಚಿಕೆ ಮಾಡಲಾಗಿದೆ